# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ

ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)ಪಿ.ಆರ್/345/2020-21, ದಿನಾಂಕ : 20-1-2021

ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂಖ್ಯೆ: ಬಿ12(5)ಪಿ.ಆರ್/35/2020-21, ದಿನಾಂಕ:29-09-2020 ಹಾಗೂ ನೋಡಲ್ ಅಧಿಕಾರಿ ರವರು ದಿನಾಂಕ: 16-01-2021 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143 ವಾರ್ಡ್ ಕಛೇರಿಯಲ್ಲಿ ಸಭೆಯನ್ನು ಏರ್ಪಡಿಸಲಾಗಿ. ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ಬೆನಕೇಶ್ ಆರ್ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು 143 | 9480684415 |
| 3 | ಶ್ರೀ.ಎಸ್.ಹೇಮಂತ್ ಕುಮಾರ್ | ಸಹಾಯಕ ಅಭಿಯಂತರರು ಬೆಸ್ಕಾಂ | 9449870535 |
| 4 | ಶ್ರೀ.ಪಿ.ನರಸಿಂಹ | ಕಿರಿಯ ಆರೋಗ್ಯ ಪರಿವೀಕ್ಷಕರು | 8660658637 |
| 5 | Subramni.B.C. | Marshal (BBMP) | |
| 6 | ಶ್ರೀಹನಮಂತ ವನಚೋಳ್ ರವರ ಪರವಾಗಿ (ಕೆ.ಕೆಂಪಣ್ಣ) | ಜಲ ಪರಿವೀಕ್ಷಕರು (BWSSB) | 9845444087 |
| 7 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 8 | ಶ್ರೀ.ರಾಮ ಐಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 9 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 10 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |

ದಿನಾಂಕ:16-010-2021 ರಂದು ನಡೆದ ವಾರ್ಡ್ -143ರ ಸಮಿತಿ ಸಭೆಯ ನಡಾವಳಿಗಳು:

Scanned by CamScanner

ಮಾನ್ಯ ನೋಡಲ್ ಅಧಿಕಾರಿಗಳ ಅನುಮತಿಯೊಂದಿಗೆ ವಾರ್ಡ್ ಸಮಿತಿಯ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ, ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರು ಮತ್ತು ವಿವಿಧ ಇಲಾಖೆಯ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲು ಎಂ.ಎಂ.ವಿ.ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ವೆಂಕಟೇಶ್ ರವರು ಮಾತನಾಡಿ ಎಂ.ಎಂ.ವಿ.ರಸ್ತೆಯಲ್ಲಿ ಇತ್ತೀಚೆಗೆ ಡಾಂಬರೀಕರಣವನ್ನು ಮಾಡುವಾಗ ತೆಗೆಸಿದ ಮಣ್ಣಿನ ಗುಡ್ಡೆಗಳಿದ್ದು ಅವುಗಳನ್ನು ತೆರವುಗೊಳಿಸಬೇಕೆಂದು ಕೋರಿದರು, ಮತ್ತು ಸದರಿ ರಸ್ತೆಯಲ್ಲಿ ಇರುವ ಮರಗಳ ಕೊಂಬೆಗಳನ್ನು ತೆಗೆಸಲು ಕ್ರಮ ಕೈಗೊಳ್ಳುವಂತೆ ಕೋರಿದರು. ನೋಡಲ್ ಅಧಿಕಾರಿಗಳು ಮಾತನಾಡಿ ಮಣ್ಣಿನ ಗುಡ್ಡೆಗಳನ್ನು ತೆರವುಗೊಳಿಸಲು ಕೂಡಲೇ ಕ್ರಮ ಕೈಗೊಳ್ಳುವಂತೆ ವಾರ್ಡ್ ಅಭಿಯಂತರರಿಗೆ ತಿಳಿಸಿದರು. ಮರಗಳ ಕೊಂಬೆಗಳನ್ನು ತೆಗೆಸುವ ಬಗ್ಗೆ ರೇಂಜ್ ಫಾರಸ್ಟ್ ಆಫೀಸರ್ ರವರಲ್ಲಿ ಮಾತನಾಡಿ ಕ್ರಮ ಕೈಗೊಳ್ಳಲು ಕೋರಲಾಗುವುದೆಂದು ಸಭೆಗೆ ತಿಳಿಸಿದರು.

ನಂತರ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ. ರಾಜು ರವರು ಮಾತನಾಡಿ ಈ ಕೆಳಕಂಡ ವಿಷಯಗಳನ್ನು ಸಭೆಯ ಗಮನಕ್ಕೆ ತಂದರು. ಅವುಗಳೆಂದರೆ,

1. ಲಾಲ್‌ಬಾಗ್ ವೆಸ್ಟ್‌ಗೇಟ್ ಬಳಿ ಇರುವ ಸರ್ಕಲ್‌ನಲ್ಲಿ ಮತ್ತು ನ್ಯಾಷನಲ್ ಕಾಲೇಜ್ ಸರ್ಕಲ್ ಹಾಗೂ ಇತರೆ ಕಡೆಗಳಲ್ಲಿ "ಜೀಬ್ರಾ ಕ್ರಾಸಿಂಗ್"ಮಾಡಿಸುವ ಬಗ್ಗೆ.
2. ಕನಕಪುರ ರಸ್ತೆಯಲ್ಲಿ ವಾಸವಿ ಸರ್ಕಲ್‌ನಿಂದ ಮಾಧವರಾವ್ ಸರ್ಕಲ್‌ವರೆಗೆ ವೈಟ್ ಟಾಪಿಂಗ್ ಕಾಮಗಾರಿಯನ್ನು ತ್ವರಿತವಾಗಿ ಮಾಡುವ ಬಗ್ಗೆ.
3. ಡಯಾಗನಲ್ ರಸ್ತೆಯಲ್ಲಿ ಪಾದಚಾರಿ ಮಾರ್ಗದಲ್ಲಿ ವಾಹನಗಳನ್ನು ನಿಲ್ಲಿಸುತ್ತಿರುವುದನ್ನು ತಡೆಯುವ ಬಗ್ಗೆ.
4. ಹೋಂ ಸ್ಕೂಲ್ ಸರ್ಕಲ್ ಬಾಂಬೆ ಹೌಸ್ ಮುಂಭಾಗ ಬೀದಿ ದೀಪಗಳನ್ನು ಅಳವಡಿಸುವ ಬಗ್ಗೆ.

ಈ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ಕ್ರಮ ಸಂಖ್ಯೆ (1) ಕ್ಕೆ ಸಂಬಂಧಿಸಿದಂತೆ ಬಿ.ಬಿ.ಎಂ.ಪಿ.ಟ್ರಾಫಿಕ್ ಇಂಜಿನಿಯರಿಂಗ್ ಸೆಲ್ (TEC) ರವರಿಗೆ ತಿಳಿಸುವುದಾಗಿಯೂ, ಕ್ರಮ ಸಂಖ್ಯೆ (2) ಕ್ಕೆ ಸಂಬಂಧಿಸಿದಂತೆ ಬಿ.ಬಿ.ಎಂ.ಪಿ ಸೆಂಟ್ರಲ್ ಪ್ರಾಜೆಕ್ಟ್ ವಿಭಾಗರವರಿಗೆ ತಿಳಿಸುವುದಾಗಿಯೂ, ಕ್ರಮ ಸಂಖ್ಯೆ (3) ಕ್ಕೆ ಸಂಬಂಧಿಸಿದಂತೆ ವಿ.ವಿ.ಪುರಂ ಟ್ರಾಫಿಕ್ ಪೊಲೀಸ್‌ರವರಿಗೆ ತಿಳಿಸುವುದಾಗಿಯೂ ಮತ್ತು ಕ್ರಮ ಸಂಖ್ಯೆ (4) ಕ್ಕೆ ಸಂಬಂಧಿಸಿದಂತೆ ಸೂಕ್ತ ಕ್ರಮ ವಹಿಸಲು ಬಿಬಿಎಂಪಿ ಎಲೆಕ್ಟ್ರಿಕಲ್ ವಿಭಾಗಕ್ಕೆ ತಿಳಿಸುವುದಾಗಿ ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

Scanned by CamScanner

ನಂತರ ಮನಃ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ. ರಾಜು ರವರು ಮಾತನಾಡಿ ಈ ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಲಾಗಿದ್ದ ವಿಷಯಗಳಾದ ಎಂ.ಎನ್.ಕೃಷ್ಣರಾವ್ ರಸ್ತೆಯಲ್ಲಿ ಬೋಲಾರ್ಡ್ಸ್‌ಗಳನ್ನು ಅಳವಡಿಸುವುದು ಮತ್ತು ಪಾದಚಾರಿ ಮಾರ್ಗದ ಕರ್ಬ್ ಕಲ್ಲುಗಳನ್ನು ಎತ್ತರಿಸುವುದು ಇತ್ಯಾದಿ ವಿಷಯಗಳನ್ನು ಎಂ.ಎನ್. ಕೃಷ್ಣರಾವ್ ರಸ್ತೆಯ ಕಾಮಗಾರಿಯ ಪೂಜಾ ಸಮದಯಲ್ಲಿ ಕಾರ್ಯಪಾಲಕ ಅಭಿಯಂತರರಾದ ಶ್ರೀಮತಿ. ಸಾವಿತ್ರಿ ಹಕ್ಕಿ ರವರೊಂದಿಗೆ ಮಾತನಾಡಲಾಗಿ ಅವರು ಸದರಿ ರಸ್ತೆಯ ಕಾಮಗಾರಿಯನ್ನು ಮಾಡುವ ಸಮಯದಲ್ಲಿ ಇವುಗಳನ್ನು ಮಾಡಿಕೊಡುವುದಾಗಿ ತಿಳಿಸಿರುವುದನ್ನು ಶ್ರೀ.ರಾಜು ರವರು ಸಭೆಗೆ ತಿಳಿಸಿದರು.

ನಂತರ ಎಂ.ಎಂ.ವಿ.ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ವೆಂಕಟೇಶ್ ರವರು ಮಾತನಾಡಿ ಕೆ.ಆರ್. ರಸ್ತೆಯಲ್ಲಿ ಖಾಸಗಿ ಬಸ್ಸುಗಳನ್ನು ಪಾರ್ಕಿಂಗ್ ಮಾಡುತ್ತಿದ್ದು,ಇದರಿಂದ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿದ್ದು ಅದನ್ನು ತೆರವುಗೊಳಿಸಲು ಕ್ರಮ ವಹಿಸಬೇಕೆಂದು ಸಭೆಗೆ ತಿಳಿಸಿದರು. ಈ ಬಗ್ಗೆ ಸೂಕ್ತ ಕ್ರಮ ವಹಿಸಲು ವಿ.ವಿ.ಪುರಂ ಟ್ರಾಫಿಕ್ ಪೊಲೀಸ್ ರವರಿಗೆ ತಿಳಿಸಲಾಗುವುದೆಂದು ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ನಂತರ ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ಓ.ವಿ.ಜಯಕುಮಾರ್ ರವರು ಮಾತನಾಡಿ ಪೊಬ್ಬತ್ತಿ ಆಸ್ಪತ್ರೆಯ ಜಂಕ್ಷನ್‌ನಲ್ಲಿ (ಸಜ್ಜನರಾವ್ ರಸ್ತೆ) ರಸ್ತೆ ದಾಟಲು ಪೆಡಸ್ಟ್ರಿಯನ್ ಕ್ರಾಸಿಂಗ್ ಹಾಕಿಸಬೇಕೆಂದು ಸಭೆಯ ಗಮನಕ್ಕೆ ತಂದರು. ಈ ಬಗ್ಗೆ ಸೂಕ್ತ ಕ್ರಮ ವಹಿಸಲು ಬಿ.ಬಿ.ಎಂ.ಪಿ.ಟ್ರಾಫಿಕ್ ಇಂಜಿನಿಯರಿಂಗ್ ಸೆಲ್ (TEC) ರವರಿಗೆ ತಿಳಿಸುವುದಾಗಿ ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ಕೊನೆಯಲ್ಲಿ ಸದಸ್ಯರೆಲ್ಲರೂ ಮಾತನಾಡಿ ಮೊದಲನೇ ಶನಿವಾರ ಮತ್ತು ಮೂರನೇ ಶನಿವಾರಗಳೆಂದು ವಾರ್ಡ್ ಸಮಿತಿ ಸಭೆಯನ್ನು ನಡೆಸಿದರೆ ವಿವಿಧ ಇಲಾಖೆ ಅಧಿಕಾರಿಗಳ ಹಾಜರಾತಿ ತುಂಬಾ ಕಡಿಮೆಯಾಗುತ್ತಿದ್ದುದರಿಂದ ಶನಿವಾರಗಳ ಬದಲಾಗಿ ಒಂದು ಬಾರಿ ಸೋಮವಾರ ಸಮಿತಿ ಸಭೆಯನ್ನು ನಡೆಸಲು ಸದಸ್ಯರೆಲ್ಲರೂ ತಿಳಿಸಿದ ಕಾರಣ ಮುಂದಿನ ಸಭೆಯನ್ನು ಸೋಮವಾರ ನಡೆಸಲು ತೀರ್ಮಾನಿಸಲಾಯಿತು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| 20/1/2021 | 20/01/2021 |
| ಕಾರ್ಯದರ್ಶಿಗಳು ಹಾಗೂ<br>ಸಹಾಯಕ ಅಭಿಯಂತರರು<br>ವಾರ್ಡ್ –143 ವಿ. ವಿ.ಪುರಂ | ನೋಡಲ್ ಅಧಿಕಾರಿಗಳು<br>ವಾರ್ಡ್ ಸಂಖ್ಯೆ: 143 ಹಾಗೂ<br>ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) |

Scanned by CamScanner